# ಕರ್ನಾಟಕ ಸರ್ಕಾರ

**ವಿಷಯ:** ಮೂಲತಃ ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆಯ ನೌಕರರಾದ ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್, ಇವರನ್ನು ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಿಸುವ ಬಗ್ಗೆ- ಆದೇಶ

**ಓದಲಾಗಿದೆ:**
1. ಶ್ರೀ ಚೇತನ್ ಕುಮಾರ್ ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್, ಇವರ ಮನವಿ ದಿನಾಂಕ:28.10.2021.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 30 ಉಖಾಯೋ 2019, ದಿನಾಂಕ:14.12.2021
3. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆ, ಇವರ ಪತ್ರ ಸಂಖ್ಯೆ:ಬೆಂಮಸಾಸಂ/ಕೇಕ/ಆಡಳಿತ/ಎ3/8756 /2021-22 ದಿನಾಂಕ:29.01.2022

***

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ:28.10.2021 ರ ಮನವಿಯಲ್ಲಿ ಶ್ರೀ ಚೇತನ್ ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್, ಇವರು ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಇವರನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಅನ್ಯ ಕರ್ತವ್ಯದ ಮೇಲೆ ನಿಯೋಜಿಸುವಂತೆ ಕೋರಿರುತ್ತಾರೆ.

ಹಾಗಾಗಿ ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್ ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಖಾಲಿ ಇರುವ ದ್ವಿತಿಯ ದರ್ಜೆ ಸಹಾಯಕರ ಹುದ್ದೆಗೆ ಎದುರಾಗಿ ಇವರನ್ನು ಗುತ್ತಿಗೆ ಆಧಾರದ ಮೇಲೆ ಅವರ ಸ್ವಂತ ವೇತನ ಶ್ರೇಣಿಯಂತೆ ತಮ್ಮ ಸಹಮತಿಯೊಂದಿಗೆ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಶಾಂತಿ ನಗರ, ಬೆಂಗಳೂರು ಇವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕೋರಲಾಗಿತ್ತು. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಶಾಂತಿ ನಗರ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಚೇರಿ ಪತ್ರದಲ್ಲಿ ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್, ಇವರನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಎರವಲು ಸೇವೆ (Deputation - Pay and perks will be paid by the concerned Department) ಆಧಾರದ ಮೇಲೆ ಬಿಟ್ಟು ಕೊಡಲು ಸಹಮತಿ ಇರುತ್ತದೆಂದು ನೌಕರರ ಸೇವೆಯನ್ನು ಕಿರಿಯ ಸಹಾಯಕರ ಹುದ್ದೆಗೆ ನೇಮಿಸುವ ಸಲುವಾಗಿ ಎರವಲು ಸೇವೆಯ ಆಧಾರದ ಮೇಲೆ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಿರುತ್ತಾರೆ.

ಸರ್ಕಾರವು ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು ಇವರು ನೀಡಿದ ಸಹಮತಿಯನ್ನು ಅನುಸರಿಸಿ, ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ)

ನಿಯಮಗಳು 1977 ರ ನಿಯಮ 15(1)(ಬಿ)(ii) ರನ್ವಯ ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್ ಇವರನ್ನು ಅವರ ಸ್ವಂತ ವೇತನ ಶ್ರೇಣಿಯಂತೆ ಗುತ್ತಿಗೆ ಆಧಾರದ ಮೇಲೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಕಿರಿಯ ಸಹಾಯಕರ ಹುದ್ದೆಗೆ ನಿಬಂಧನೆ ಹಾಗೂ ಷರತ್ತಿಗೊಳಪಟ್ಟು ನೇಮಿಸಲು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 46 ಯೋಉಮಾ 2022**
**ಬೆಂಗಳೂರು, ದಿನಾಂಕ:22.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಮೂಲತಃ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ನೌಕರರಾದ ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್ ಇವರನ್ನು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 15(1)(ಬಿ)(ii) ರನ್ವಯ ಅವರ ಸ್ವಂತ ವೇತನ ಶ್ರೇಣಿಯಂತೆ ಗುತ್ತಿಗೆ ಆಧಾರದ ಮೇಲೆ ದಿನಾಂಕ:22.03.2022 ರಿಂದ ಜಾರಿಗೆ ಬರುವಂತೆ ಎರಡು ವರ್ಷಗಳ ಅವಧಿಗೆ ಈ ಆದೇಶದೊಂದಿಗೆ ಲಗತ್ತಿಸಿರುವ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಇಲ್ಲಿ ಖಾಲಿಯಿರುವ ಕಿರಿಯ ಸಹಾಯಕರ ಹುದ್ದೆಗೆ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಅನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಲೆಕ್ಕಪತ್ರ ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಶಾಂತಿನಗರ, ಬೆಂಗಳೂರು
3. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಶಾಂತಿನಗರ ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದ್ ರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು.
6. ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬೆಂಗಳೂರು
7. ಸಂಬಂಧಿಸಿದ ನೌಕರರಿಗೆ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಜಂಟಿ ಕಾರ್ಯದರ್ಶಿಗಳು, (ಆಡಳಿತ-1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ
3. ಶಾಖಾ ರಕ್ಷಾ ಕಡತ / ವೆಬ್ ಸೈಟ್ ನಲ್ಲಿ ಪ್ರಕಟಿಸಲು ಶಾಖಾ ರಕ್ಷಾಕಡತ.

## ಒಪ್ಪಂದದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು

1. **ಅವಧಿ:** ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್ ಇವರ ಒಪ್ಪಂದದ ಆಧಾರದ ಮೇಲೆ ನೇಮಕಾತಿಯ ಅವಧಿಯು ದಿನಾಂಕ:22.03.2022 ರಿಂದ ಎರಡು ವರ್ಷದ ಅವಧಿಗೆ ಮಾತ್ರ ಇರುತ್ತದೆ.

2. **ಗುತ್ತಿಗೆ ನೇಮಕಾತಿಯ ಪ್ರಾರಂಭ ಹಾಗೂ ಅಂತ್ಯ:** ಸದರಿ ನೌಕರರ ಒಪ್ಪಂದದ ನಿಯೋಜನಾ ನೇಮಕಾತಿಯ ದಿನಾಂಕ: 22.03.2022 ರಿಂದ ಪ್ರಾರಂಭಗೊಂಡು ಹುದ್ದೆಯ ಪ್ರಭಾರವನ್ನು ಹಿಂದಕ್ಕೆ ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುತ್ತದೆ.

3. **ವೇತನ ಮತ್ತು ಇತರೆ ಭತ್ಯೆಗಳು:** ಶ್ರೀ ಚೇತನ್‌ಕುಮಾರ್. ಜೆ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್ ಇವರು ಒಪ್ಪಂದದ ನೇಮಕಾತಿಯ ಅವಧಿಯಲ್ಲಿ ಅವರ ಮಾತೃ ಇಲಾಖೆಯಲ್ಲಿ ಪಡೆಯುತ್ತಿದ್ದ ವೇತನ, ತುಟ್ಟಿಭತ್ಯೆ, ಕಾರ್ಯನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಆದರೆ, ನಿಯೋಜನೆಯ ಭತ್ಯೆ, ಅನ್ಯ ಸೇವಾ ಭತ್ಯೆ ಅಥವಾ ಇನ್ನಾವುದೇ ಭತ್ಯೆ ಹೆಚ್ಚಿನ ಕಾಲದ ಭತ್ಯೆ, ಬೋನಸ್, ಅನುಗ್ರಹ ಪೂರ್ವ ಭತ್ಯೆ ಪಡೆಯಲು ಅರ್ಹರಲ್ಲ.

4. **ರಜಾ ನಿಯಮಗಳು:** ಇವರ ಮಾತೃ ಇಲಾಖೆಯಲ್ಲಿನ ರಜಾ ನಿಯಮಗಳಿಗೆ ಅರ್ಹರಿರುತ್ತಾರೆ.

5. **ರಜಾ ವೇತನ ವಂತಿಗೆ:** ಅಧಿಕಾರಿಯವರ ಮೂಲ ವೇತನದ ಶೇಕಡಾ 11 ರಷ್ಟನ್ನು ರಜಾ ವೇತನ ವಂತಿಗೆಯಾಗಿ ಸರ್ಕಾರವು ಪಾವತಿಸುತ್ತದೆ.

6. **ಭವಿಷ್ಯ ನಿಧಿ ವಂತಿಗೆ:** ಅಧಿಕಾರಿಯು ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇ.12 ರಷ್ಟನ್ನು ಸರ್ಕಾರದ ವತಿಯಿಂದ ವಂತಿಗೆ, ಮತ್ತು ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡಾ 12 ರಷ್ಟನ್ನು ವಂತಿಗೆಯಾಗಿ ತಿಂಗಳಿನ ಸಂಬಳದಲ್ಲಿ ಕಟಾಯಿಸಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಪಾವತಿಸತಕ್ಕದ್ದು.

7. **ಉಪದಾನ ವಂತಿಗೆಗಳು:** ಸರ್ಕಾರವು ಪ್ರತಿ ತಿಂಗಳು 8.33% ರಷ್ಟು ವೇತನ ಮತ್ತು ಅದಕ್ಕೆ ಸಮನಾದ ತುಟ್ಟಿ ಭತ್ಯೆಯೊಂದಿಗೆ ಉಪದಾನ ವಂತಿಗೆಯಾಗಿ ನೀಡುತ್ತದೆ.

8. **ವೈದ್ಯಕೀಯ ರಿಯಾಯಿತಿ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ಅನ್ವಯ ವೈದ್ಯಕೀಯ ವೆಚ್ಚವನ್ನು ಪಡೆಯಲು ಅರ್ಹರಿರುತ್ತಾರೆ.

9. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಿರಿಯ ಸಹಾಯಕರ ಹುದ್ದೆಗೆ ನಿಗಧಿಪಡಿಸಿರುವ ಕೆಲಸಗಳನ್ನು ಹಾಗೂ ಸರ್ಕಾರವು / ಮೇಲಾಧಿಕಾರಿಗಳು ಕಾಲಕಾಲಕ್ಕೆ ವಹಿಸಿಕೊಡುವ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

10. 1966 ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957 ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮಾವಳಿಗಳಿಗೆ ತಾನಾಗಿಯೇ ಮುಕ್ತಾಯವಾಗುತ್ತದೆ.

11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

12. ಶ್ರೀ ಚೇತನ್‌ಕುಮಾರ್. ಜಿ., ಕಿರಿಯ ಸಹಾಯಕರು-ಕಂ-ಡೇಟಾ ಎಂಟ್ರಿ ಆಪರೇಟರ್ ಇವರು ಕಿರಿಯ ಸಹಾಯಕರ ಹುದ್ದೆಯ ಕೆಲಸ ಕಾರ್ಯಗಳನ್ನು ಶ್ರದ್ಧಾಭಕ್ತಿಯಿಂದ ನಿರ್ವಹಿಸತಕ್ಕದ್ದು ಹಾಗೂ ತಮ್ಮ ಕರ್ತವ್ಯಗಳನ್ನು ನಿರ್ವಹಿಸುವಾಗ ತಿಳಿದು ಬರುವಂತೆ ಕಚೇರಿಯ ಅಧಿಕೃತ, ಗೌಪ್ಯ ಮಾಹಿತಿಗಳ ಬಗ್ಗೆ ಕಟ್ಟು ನಿಟ್ಟಾಗಿ ಗೌಪತ್ಯೆಯನ್ನು ಕಾಪಾಡತಕ್ಕದ್ದು.

13. ನೌಕರರ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾಗಿರುವ ಯಾವುದೇ ನಷ್ಟಗಳನ್ನು ಭರಿಸಿಕೊಡಲು ನೌಕರರು ಭಾದ್ಯತೆಯುಳ್ಳವರಾಗಿರುತ್ತಾರೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ.50/-) ರೂಪಾಯಿಗಳ ಮೌಲ್ಯದ ಛಾಪಾ ಕಾಗದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸಲ್ಲಿಸುವುದು.

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ದಿನಾಂಕ: 22.03.2022.
ಸ್ಥಳ: ಬೆಂಗಳೂರು